**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಸಿ.ಎನ್ ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) ರವರು ನಿಯಮ -330 ಅಡಿ ನೀಡಿರುವ ಸೂಚನೆಗೆ ಉತ್ತರ.**

**ಪ್ರಶ್ನೆ:**

ಪೊಲೀಸ್ ಸಬ್ ಇನ್ಸ್ ಪೆಕ್ಟರ್ (ಸಿವಿಲ್) ವೃಂದ ಮತ್ತು ನೇಮಕಾತಿ ನಿಯಮದಲ್ಲಿ ನೇರ ನೇಮಕಾತಿ ಮತ್ತು ಮುಂಬಡ್ತಿ ಹುದ್ದೆಗಳ ನಡುವ 70:30 ಅನುಪಾತವಿದ್ದು ಪರಿಷ್ಕರಿಸಿ 50:50 ಅನುಪಾತಕ್ಕೆ ಸರಿಪಡಿಸಲು ಹಾಗೂ ಎಎಸ್ಐ ಮತ್ತು ಪಿಎಸ್ಐ ಗಳಿಗೂ 30 ದಿನಗಳ ಗೆಜೆಟೆಡ್ ಹಾಲಿಡೇಯನ್ನು ಮಂಜೂರು ಮಾಡಬೇಕೆನ್ನುವ ವಿಷಯ.

**ಉತ್ತರ:**

ರಾಜ್ಯ ಪೊಲೀಸ್ ಇಲಾಖೆಯಲ್ಲಿ ಪಿ.ಎಸ್.ಐ (ಸಿವಿಲ್) ಹುದ್ದೆಯು ಪ್ರಮುಖ ಹುದ್ದೆಯಾಗಿದ್ದು, ಸಂಬಂಧಪಟ್ಟ ಠಾಣಾ ವ್ಯಾಪ್ತಿಯ ಸಂಪೂರ್ಣ ಕಾನೂನು ಮತ್ತು ಸುವ್ಯವಸ್ಥೆಯ ನಿರ್ವಹಣೆ, ಅಪರಾಧ ತಡೆಗಟ್ಟುವಿಕೆ, ಅಪರಾಧ ಪ್ರಕರಣಗಳ ಪತ್ತೆ ಮತ್ತು ತನಿಖೆ, ಸಂಚಾರ ನಿರ್ವಹಣೆಯು ಇವರ ಮುಖ್ಯ ಕರ್ತವ್ಯವಾಗಿರುತ್ತದೆ. ಈ ಕರ್ತವ್ಯಗಳನ್ನು ನಿರ್ವಹಿಸಲು ದೈಹಿಕವಾಗಿ ಮತ್ತು ಮಾನಸಿಕವಾಗಿ ಸದೃಢತೆ ಹಾಗೂ ತಾಂತ್ರಿಕ ನೈಪುಣ್ಯತೆಯುಳ್ಳ ಯುವ ಅಧಿಕಾರಿಗಳ ಅವಶ್ಯಕತೆ ಇರುತ್ತದೆ. ಅಲ್ಲದೇ ಇತ್ತೀಚಿನ ದಿನಗಳಲ್ಲಿ ಅಪರಾಧ ಪ್ರಕರಣಗಳು ಹೆಚ್ಚಿನ ತಾಂತ್ರಿಕತೆಯಿಂದ ಕೂಡಿದ್ದು, ಇಂತಹ ಪ್ರಕರಣಗಳ ಪತ್ತೆಗೆ ಹೆಚ್ಚಿನ ತಾಂತ್ರಿಕ ವಿದ್ಯಾರ್ಹತೆಯುಳ್ಳ ಯುವಕರ ಅವಶ್ಯಕತೆ ಇರುತ್ತದೆ.

ಸಾಮಾನ್ಯವಾಗಿ ಪೊಲೀಸ್ ಕಾನ್‌ಸ್ಟೇಬಲ್ ವೃಂದದ ಸಿಬ್ಬಂದಿಗಳು ಕ್ರಮವಾಗಿ ಹೆಡ್ ಕಾನ್ಸ್ ಟೇಬಲ್ ಮತ್ತು ಎಎಸ್ಐ ಹುದ್ದೆಗಳಿಗೆ 02 ಮುಂಬಡ್ತಿಯನ್ನು ಹೊಂದಿ ನಂತರ ಪಿ.ಎಸ್.ಐ(ಸಿವಿಲ್) ಹುದ್ದೆಗೆ ಅರ್ಹರಾಗುತ್ತಾರೆ. ಇವರ ಶಿಕ್ಷಣವು ಮೂಲ ಹುದ್ದೆಯ ಕನಿಷ್ಟ ಮಟ್ಟದ್ದಾಗಿರುವುದರಿಂದ ಪ್ರಸ್ತುತ ವರದಿಯಾಗುತ್ತಿರುವ ಹೆಚ್ಚಿನ ತಾಂತ್ರಿಕತೆ ಅಪರಾಧ ಪ್ರಕರಣ ಭೇದಿಸುವುದು ಕಷ್ಟಸಾಧ್ಯವಾಗಿರುತ್ತದೆ.

ಪೊಲೀಸ್ ಇಲಾಖೆಯ ಕಾರ್ಯ ನಿರ್ವಹಣೆ ಹಾಗೂ ಇತರ ಇಲಾಖೆಗಳ ಕಾರ್ಯನಿರ್ವಹಣೆಗೂ ಸಾಕಷ್ಟು ವ್ಯತ್ಯಾಸವಿರುವುದರಿಂದ ಪೊಲೀಸ್ ಇಲಾಖೆಯ ಪಿಎಸ್ ಐ ಹುದ್ದೆಯನ್ನು ಇತರ ಇಲಾಖೆಯ ಹುದ್ದೆಗಳೊಂದಿಗೆ ಹೋಲಿಸುವುದು ಸೂಕ್ತವಾಗಿರುವುದಿಲ್ಲ. ಈ ಹಿನ್ನಲೆಯಲ್ಲಿ ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳಲ್ಲಿ ಪಿಎಸ್ಐ ಹುದ್ದೆಗೆ ಅನುಭವವುಳ್ಳ ಮತ್ತು ಯುವ ಅಧಿಕಾರಿಗಳನ್ನು ಪರಿಗಣಿಸಿ ನೇರ ನೇಮಕಾತಿ ಮತ್ತು ಮುಂಬಡ್ತಿಗೆ ಶೇಕಡ 70:30ರ ಅನುಪಾತವನ್ನು ನಿಗದಿಪಡಿಸಲಾಗಿದ್ದು, ಸದರಿ ಅನುಪಾತ ನಿಗದಿಯು ಇಲಾಖೆಯ ಕಾರ್ಯನಿರ್ವಹಣೆ ಮತ್ತು ಆಡಳಿತಕ್ಕೆ ಪೂರಕವಾಗಿರುತ್ತದೆ.

ಪೊಲೀಸ್ ಇಲಾಖೆಯು ಶಿಸ್ತಿನ ಹಾಗೂ ನಿರಂತರ ಕಾರ್ಯನಿರತ ಸೇವೆಯಾಗಿದ್ದು, ಕ್ಷೇತ್ರ ಮಟ್ಟದಲ್ಲಿ ಶಾರೀರಿಕ ಸಾಮಾರ್ಥ್ಯ, ತ್ವರಿತ ಸ್ಪಂದನೆ ಹಾಗೂ ನವೀನ ತರಭೇತಿ ಹೊಂದಿರುವ ಸಿಬ್ಬಂದಿಗಳ ನಿರಂತರ ಅವಶ್ಯಕತೆ ಇರುವುದರಿಂದ ಯುವ ಹಾಗೂ ದೈಹಿಕ ಸಾಮರ್ಥ್ಯ ಹೊಂದಿರುವ ಯುವ ಅಧಿಕಾರಿಗಳು ಬಂದೋಬಸ್ತ್ ಹಾಗೂ ಕಾನೂನು ಸುವ್ಯವಸ್ಥೆ ಕರ್ತವ್ಯಗಳಿಗೆ ಹೆಚ್ಚು ಸೂಕ್ತವಾಗಿರುತ್ತಾರೆ.

ಈ ಹಿನ್ನಲೆಯಲ್ಲಿ ಇಲಾಖೆಯಲ್ಲಿ ಪಿಎಸ್ಐ ಹುದ್ದೆಯ ಮುಂಬಡ್ತಿ ಮತ್ತು ನೇರ ನೇಮಕಾತಿ ಅನುಪಾತ ಶೇಕಡಾ 70:30 ಅನ್ನು ಪರಿಷ್ಕರಿಸಿ ಶೇಕಡಾ 50:50 ಕ್ಕೆ ನಿಗಧಿಪಡಿಸುವ ಯಾವುದೇ ಪ್ರಸ್ತಾವನೆ ಇರುವುದಿಲ್ಲ.

ಪೊಲೀಸ್ ಇಲಾಖೆಯ ಸಿಬ್ಬಂದಿಗಳಿಗೆ ಲಭ್ಯವಿರುವ ಪತ್ರಾಂಕಿತ ರಜಾ ವೇತನದ ಸೌಲಭ್ಯವೂ ಸೇರಿದಂತೆ ಸರ್ಕಾರಿ ನೌಕರರ ವಿಶೇಷ ಭತ್ಯೆಯ ಪರಿಷ್ಕರಣೆಯು ಸರ್ಕಾರದ ನೀತಿ ನಿರ್ಣಯಕ್ಕೆ ಸಂಬಂಧಿಸಿದ್ದಾಗಿದ್ದು, ಪೊಲೀಸ್ ಇಲಾಖೆಯ ಎ.ಎಸ್.ಐ ಮತ್ತು ಸಿಬ್ಬಂದಿಗಳು ಪಿ.ಎಸ್.ಐ ವೃಂದದ ಪತ್ರಾಂಕಿತ ರಜಾ ದಿವಸಗಳಲ್ಲಿ ಕಾರ್ಯನಿರ್ವಹಿಸಿದ್ದಕ್ಕಾಗಿ ಪ್ರಸ್ತುತ ಲಭ್ಯವಿರುವ 15 ದಿವಸಗಳ ವೇತನವನ್ನು 30 ದಿವಸಗಳ ವೇತನಕ್ಕೆ ಪರಿಷ್ಕರಿಸುವ ಪ್ರಸ್ತಾವನೆಯು ಸರ್ಕಾರದ ಮುಂದೆ ಇರುವುದಿಲ್ಲ.

ಸಂಖ್ಯೆ: ಒಇ 361 ಪಿಇಐ 2025

(ಡಾ: ಜಿ. ಪರಮೇಶ್ವರ)
ಗೃಹ ಸಚಿವರು